ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	**1878(2184)**
ಮಾನ್ಯ ಸದಸ್ಯರ ಹೆಸರು	ಶ್ರೀ ಸಲೀಂ ಅಹಮದ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ	18.03.2022
ಉತ್ತರಿಸುವ ಸಚಿವರು	ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
ಅ)	ಹಿಂದುಳಿದ ಜಾತಿಗಳು ನಡೆಸುವ ಶೈಕ್ಷಣಿಕ ಸಂಸ್ಥೆಗಳ ಶಾಲಾ-ಕಾಲೇಜು ಕಟ್ಟಡಗಳ ನಿರ್ಮಾಣಕ್ಕೆ ಸಹಾಯಧನ ನೀಡುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ;	ವಿವಿಧ ಸಮುದಾಯಗಳ ಅಭಿವೃದ್ಧಿ ಕಾರ್ಯಕ್ರಮದಡಿ ರಾಜ್ಯದಲ್ಲಿ ಹಿಂದುಳಿದ ವರ್ಗಗಳ ವಿವಿಧ ಜಾತಿ/ಜನಾಂಗಗಳ ಸಮುದಾಯ ಚಟುವಟಿಕೆಗಳನ್ನು ಹಾಗೂ ವಿದ್ಯಾರ್ಥಿನಿಲಯಗಳನ್ನು ನಡೆಸಲು ವಿವಿಧ ಹಿಂದುಳಿದ ವರ್ಗಗಳ ಜಾತಿಗಳಿಗೆ ಸೇರಿದ ಸಂಘ-ಸಂಸ್ಥೆಗಳಿಗೆ ಸಮುದಾಯ ಭವನ /ವಿದ್ಯಾರ್ಥಿನಿಲಯ ಕಟ್ಟಡ ನಿರ್ಮಾಣಕ್ಕೆ ಸರ್ಕಾರದಿಂದ ಅನುದಾನ ಮಂಜೂರು ಅವಕಾಶ ಕಲ್ಪಿಸಲಾಗಿರುತ್ತದೆ. ಆದರೆ, ಹಿಂದುಳಿದ ಜಾತಿಗಳು ನಡೆಸುವ ಶೈಕ್ಷಣಿಕ ಸಂಸ್ಥೆಗಳ ಶಾಲಾ-ಕಾಲೇಜು ಕಟ್ಟಡಗಳ ನಿರ್ಮಾಣಕ್ಕೆ ಸಹಾಯಧನ ನೀಡುವ ಪ್ರಸ್ತಾಪ ಸರ್ಕಾರದ ಮುಂದಿರುವುದಿಲ್ಲ.
ಆ)	ಹಾಗಿದ್ದಲ್ಲಿ, 2021-22ನೇ ಸಾಲಿನ ಆಯವ್ಯಯದಲ್ಲಿ ಎಷ್ಟು ಅನುದಾನ ಹಂಚಿಕೆ ಮಾಡಲಾಗಿದೆ ?	ಅನ್ವಯಿಸುವುದಿಲ್ಲ.
ಇ)	ಇಲ್ಲದೆ, ಇದ್ದಲ್ಲಿ ಸರ್ಕಾರಕ್ಕೆ ಇರುವ ಸಮಸ್ಯೆಗಳು ಯಾವುವು;	ಹೊಸ ಯೋಜನೆಗಳು ಪ್ರತಿ ವರ್ಷ ಆಯವ್ಯಯದಲ್ಲಿ ಒದಗಿಸಲಾಗುವ ಅನುದಾನದ ಲಭ್ಯತೆಯನ್ನು ಅವಲಂಭಿಸಿರುತ್ತದೆ. ಪ್ರಸ್ತುತ ಹಿಂದುಳಿದ ಜಾತಿಗಳ ಶೈಕ್ಷಣಿಕ ಸಂಸ್ಥೆಗಳಿಗೆ ಶಾಲಾ-ಕಾಲೇಜು ಕಟ್ಟಡಗಳ ನಿರ್ಮಾಣಕ್ಕೆ ಸಹಾಯಧನ ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ.
ಈ)	ಹಿಂದುಳಿದ ಜಾತಿಗಳ ಶೈಕ್ಷಣಿಕ ಸಂಸ್ಥೆಗಳಿಗೆ ಸಹಾಯಧನ ನೀಡಿದ್ದಲ್ಲಿ, ಗುಣಮಟ್ಟದ ಶಿಕ್ಷಣವನ್ನು ನೀಡಲು ಸಹಾಯಕವಾಗುವುದಲ್ಲವೇ? (ವಿವರ ನೀಡುವುದು)	

ಸಂಖ್ಯೆ: ಹಿಂವಕ 224 ಬಿಎಂಎಸ್ 2022

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಹಾಗೂ ಹಿಂದುಳಿದ
ವರ್ಗಗಳ ಕಲ್ಯಾಣ ಸಚಿವರು